# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 06.01.2012**

ಅರ್ಹತಾ ದಿನಾಂಕ: 01.01.2012 ರಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರಗಳ ಭಾವಚಿತ್ರವುಳ್ಳ ಅಂತಿಮ ಮತದಾರರ ಪಟ್ಟಿಯನ್ನು ಸಾರ್ವಜನಿಕರ ಪರಿಶೀಲನೆಗಾಗಿ ಸಂಬಂಧಪಟ್ಟ ವಿಧಾನಸಭಾ ಕ್ಷೇತ್ರಗಳ ಮತದಾರರ ನೋಂದಣಿ ಕಛೇರಿಯಲ್ಲಿ, ವಾರ್ಡ್ ಕಛೇರಿಯಲ್ಲಿ ಹಾಗೂ www.ceokarnataka.kar.nic.in ಅಂತರ್ಜಾಲದಲ್ಲಿಯೂ ಸಹ ದಿನಾಂಕ: 05.01.2012 ರಂದು ಪ್ರಚುರಪಡಿಸಲಾಗಿದೆ.

ಮತದಾರರ ಪಟ್ಟಿ ಪರಿಶೀಲನೆ ಸಂದರ್ಭದಲ್ಲಿ ಹೆಸರು ಮತದಾರರ ಪಟ್ಟಿಯಲ್ಲಿ ಇಲ್ಲದಿದ್ದ ಸಂದರ್ಭದಲ್ಲಿ ಹತ್ತಿರದ ಸಹಾಯಕ ನೋಂದಣಾಧಿಕಾರಿಗಳ ಕಛೇರಿ, ವಾರ್ಡ್ ಕಛೇರಿಯಲ್ಲಿ ನಮೂನೆ-6 ರಲ್ಲಿ ಇತ್ತೀಚಿನ ಭಾವಚಿತ್ರ, ವಿಳಾಸದ ಬಗ್ಗೆ ಮಾಹಿತಿಯ ಪ್ರತಿ, ವಯಸ್ಸಿನ ಬಗ್ಗೆ ಮಾಹಿತಿಯೊಂದಿಗೆ ಅರ್ಜಿಯನ್ನು ಭರ್ತಿಮಾಡಿ, ಹೆಸರನ್ನು ಮತದಾರರ ಪಟ್ಟಿಯಲ್ಲಿ ನೊಂದಾಯಿಸಿಕೊಳ್ಳಲು "ವಿಶೇಷ ಆಂದೋಲನಾ" ಕಾರ್ಯಕ್ರಮವನ್ನು ದಿನಾಂಕ: 05.01.2012 ರಿಂದ 20.01.2012ರ ವರೆಗೆ ಬಿಬಿಎಂಪಿ ವ್ಯಾಪ್ತಿಯ ಎಲ್ಲಾ 198 ವಾರ್ಡ್‌ಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಇದರ ಸದುಪಯೋಗವನ್ನು ಎಲ್ಲಾ ಅರ್ಹ ಮತದಾರರು ಉಪಯೋಗಿಸಿಕೊಳ್ಳುವಂತೆ ಸಾರ್ವಜನಿಕರಲ್ಲಿ ಪಾಲಿಕೆ ಆಯುಕ್ತರಾದ ಶ್ರೀ ಎಂ.ಕೆ.ಶಂಕರಲಿಂಗೇಗೌಡ ರವರು ಮನವಿ ಮಾಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 06.01.2012**

## ನಾಳೆಯಿಂದ ಅನಧಿಕೃತ ಜಾಹೀರಾತು ಫಲಕ ತೆಗೆಯಲು ಪಾಲಿಕೆ ಕ್ರಮ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ವಿವಿಧ ರಸ್ತೆಯ ಬದಿಗಳಲ್ಲಿ ಮತ್ತು ಮರದ ರೆಂಬೆ ಕೊಂಬೆಗಳಿಗೆ ವಿವಿಧ ವ್ಯಕ್ತಿಗಳು/ಸಂಘ ಸಂಸ್ಥೆಗಳು ಅನಧಿಕೃತವಾಗಿ ಹುಟ್ಟು ಹಬ್ಬದ, ಸಂತಾಪ ಸೂಚನೆ, ಶುಭಾಶಯ ಸಂದೇಶಗಳನ್ನು ಮತ್ತು ಇತರೆ ಕಾರ್ಯಕ್ರಮಗಳ ಕುರಿತು ಪ್ರಚಾರ ಮಾಡಲು ಬೋರ್ಡ್‌ಗಳನ್ನು, ಪೋಸ್ಟರ್‌ಗಳನ್ನು, ಫ್ಲೆಕ್ಸ್ ಬ್ಯಾನರ್‌ಗಳನ್ನು ಹೇರಳವಾಗಿ ಹಾಕಿ, ನಗರದ ಸೌಂದರ್ಯಕ್ಕೆ ಧಕ್ಕೆಯುಂಟು ಮಾಡುತ್ತಿರುವ ಹಿನ್ನೆಲೆಯಲ್ಲಿ ಪಾಲಿಕೆಯ ಆಯುಕ್ತರಾದ ಶ್ರೀ ಎಂ.ಕೆ. ಶಂಕರಲಿಂಗೇಗೌಡ ರವರು ಇಂದು ವಲಯ ಅಪರ / ಜಂಟಿ ಆಯುಕ್ತರುಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿ, ನಾಳೆಯಿಂದ ಅನಧಿಕೃತ ಪ್ರಚಾರ ಫಲಕಗಳನ್ನು ತೆರವುಗೊಳಿಸಲು ಸೂಚನೆ ನೀಡಿದ್ದಾರೆ.

ಪಾಲಿಕೆಯ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಕಟೌಟ್, ಪೋಸ್ಟರ್‌ಗಳನ್ನು, ಫ್ಲೆಕ್ಸ್ ಬ್ಯಾನರ್‌ಗಳನ್ನು, ಶುಭಾಶಯ ಸಂದೇಶಗಳನ್ನು ಅಂಟಿಸಿರುವುದು ಹೇರಳವಾಗಿರುತ್ತದೆ. ಈ ರೀತಿಯ ಅನಧಿಕೃತ ಬೋರ್ಡ್‌ಗಳು, ಪೋಸ್ಟರ್‌ಗಳು / ಬ್ಯಾನರ್‌ಗಳನ್ನು ಹಾಕಿ, ನಗರದ ಸೌಂದರ್ಯಕ್ಕೆ ಧಕ್ಕೆಯುಂಟು ಮಾಡುತ್ತಿದ್ದು, ಇದೊಂದು ಶಿಕ್ಷಾರ್ಹ ಅಪರಾಧವಾಗಿದೆ. ಅನಧಿಕೃತವಾಗಿ ಜಾಹೀರಾತು ಫಲಕಗಳನ್ನು ಹಾಕಿದ್ದಲ್ಲಿ ಅಂತಹವರ ವಿರುದ್ಧ Karnataka Open Places (Prevention of Disfigurement) Act ಅಡಿಯಲ್ಲಿ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದೆಂದು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**